ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಕುರಿತು

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

1488 (1758) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಕಾಲೇಜುಗಳಲ್ಲಿ ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು ಎಷ್ಟು; (ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಹಾಗೂ ವರ್ಗಾವಣೆಯಿಂದಾಗಿ ಎಷ್ಟು ಹುದ್ದೆಗಳು ಖಾಲಿ ಇವೆ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಹುದ್ದೆಗಳ ಭರ್ತಿಗೆ ಅನುಮತಿ ನೀಡದೇ ಇರುವುದರಿಂದ ಉನ್ನತ ಶಿಕ್ಷಣದಿಂದ ವಿದ್ಯಾರ್ಥಿಗಳು ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?